# <u>ಅನುಬಂಧ – 1</u>

## ಮಲೆನಾಡು ಅಡಿಕೆ ಮಾರಾಟದ ಸಹಕಾರ ಸಂಘ ನಿಯಮಿತ, ಶಿವಮೊಗ್ಗ
## ಎ.ಪಿ.ಎಂ.ಸಿ ಆವರಣ, ಸಾಗರ ರಸ್ತೆ, ಶಿವಮೊಗ್ಗ -577204

ಮಲೆನಾಡು ಅಡಿಕೆ ಮಾರಾಟದ ಸಹಕಾರ ಸಂಘ ನಿಯಮಿತ, ಶಿವಮೊಗ್ಗ ಇದರಲ್ಲಿ ಖಾಲಿ ಇರುವ ಐದು ಹಮಾಲರ ಹುದ್ದೆಗಳ ನೇರ ನೇಮಕಾತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ನೇರ ನೇಮಕಾತಿಗೆ ಪ್ರಕಟಣೆ ಹೊರಡಿಸಿರುವ ಹುದ್ದೆಗೆ ಅರ್ಜಿಯನ್ನು ಸಲ್ಲಿಸಲು ಅಗತ್ಯವಿರುವ ವಿದ್ಯಾರ್ಹತೆ, ವಯೋಮಿತಿ, ಅರ್ಜಿ ಶುಲ್ಕ ಇತ್ಯಾದಿ ವಿವರಗಳು ಈ ಕೆಳಕಂಡಂತೆ ಇರುತ್ತದೆ.

**ಹುದ್ದೆ : ಹಮಾಲರು**

**ಸಂಖ್ಯೆ : 05**

**ವೇತನ ಶ್ರೇಣಿ :** ರೂ.27,000.00 – 46,675.00

**ಪರೀಕ್ಷಾರ್ಥ ಅವಧಿಯಲ್ಲಿ ಪಾವತಿಸುವ ಕ್ರೋಢೀಕೃತ ವೇತನ : ರೂ.27,000.00** (ಶಾಸನಬದ್ಧ ಕಡಿತಗಳು ಸೇರಿದಂತೆ)

**ವಿದ್ಯಾರ್ಹತೆ ಮತ್ತು ಇತರೆ ಅರ್ಹತೆಗಳು :**

- ಎಂಟನೇ ತರಗತಿಯಲ್ಲಿ ಉತ್ತೀರ್ಣರಾಗಿದ್ದು ಕನ್ನಡವನ್ನು ಒಂದು ಭಾಷೆಯಾಗಿ ಓದಿರತಕ್ಕದ್ದು.
- ಕನ್ನಡ ಭಾಷೆಯನ್ನು ಬರೆಯಲು ಮತ್ತು ಓದಲು ಬರುವಂತಿರಬೇಕು.
- ಹಮಾಲಿ ಹುದ್ದೆಯನ್ನು ನಿರ್ವಹಿಸಲು ಅಡ್ಡಿಪಡಿಸುವಂತಹ ಯಾವುದೇ ಅಂಗ ವೈಕಲ್ಯ ಮತ್ತು ದೈಹಿಕ ನ್ಯೂನತೆ ಹೊಂದಿರತಕ್ಕದ್ದಲ್ಲ.
- ಹಮಾಲರ ಹುದ್ದೆಗೆ ನಿಗದಿಪಡಿಸಿದ ವಿದ್ಯಾರ್ಹತೆ ಹೊರತುಪಡಿಸಿ, ಯಾವುದೇ ಉನ್ನತ ವಿದ್ಯಾಭ್ಯಾಸದ ಪ್ರಮಾಣಪತ್ರಗಳನ್ನು ಪರಿಗಣಿಸಲಾಗುವುದಿಲ್ಲ.

### 1. ವಯೋಮಿತಿ:-

ಕರ್ನಾಟಕ ರಾಜ್ಯ ಸರ್ಕಾರದ ಆದೇಶ ಸಂಖ್ಯೆ : **ಸಿಆಸುಇ 262 ಸೇನೆನಿ 2025 ಬೆಂಗಳೂರು, ದಿನಾಂಕ : 29.01.2026ರ** ಆದೇಶದಂತೆ ಎಲ್ಲಾ ವರ್ಗದ ಅಭ್ಯರ್ಥಿಗಳಿಗೆ ಆಯಾಯ ನೇಮಕಾತಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯಲ್ಲಿ 5 ವರ್ಷಗಳ ಸಡಿಲಿಕೆ ನೀಡಲಾಗಿರುತ್ತದೆ.

ಆ ಪ್ರಕಾರ ದಿನಾಂಕ 03.03.2026ಕ್ಕೆ ಇದ್ದಂತೆ ಅಭ್ಯರ್ಥಿಗಳ ಕನಿಷ್ಠ ಮತ್ತು ಗರಿಷ್ಠ ವಯೋಮಿತಿಯು ಈ ಕೆಳಕಂಡಂತಿರುತ್ತದೆ.

| ಕ್ರ.ಸಂ | ಜಾತಿ | ಕನಿಷ್ಠ ವಯೋಮಿತಿ | ಗರಿಷ್ಠ ವಯೋಮಿತಿ |
|---|---|---|---|
| 1 | ಸಾಮಾನ್ಯ ವರ್ಗದ ಅಭ್ಯರ್ಥಿಗಳಿಗೆ | 18 | 40 |
| 2 | ಇತರೆ ಹಿಂದುಳಿದ ವರ್ಗದ ಅಭ್ಯರ್ಥಿಗಳಿಗೆ | 18 | 43 |
| 3 | ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡ ಅಥವಾ ಇತರೆ ಹಿಂದುಳಿದ ವರ್ಗಗಳ ವರ್ಗ-1ಕ್ಕೆ ಸೇರಿರುವ ಅಭ್ಯರ್ಥಿಗಳಿಗೆ | 18 | 45 |

## 2. ಅರ್ಜಿ ಶುಲ್ಕ:-

| | | |
|---|---|---|
| 1 | ಇತರೆ ಹಿಂದುಳಿದ ವರ್ಗಗಳ ವರ್ಗ-1,<br>ಪರಿಶಿಷ್ಟ ಜಾತಿ /ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಪಾವತಿಸಬೇಕಾದ ಶುಲ್ಕ | **ರೂ.300+18% ಜಿ.ಎಸ್.ಟಿ = ರೂ.354.00** |
| 2 | ಹಿಂದುಳಿದ ವರ್ಗ ಮತ್ತು ಸಾಮಾನ್ಯ ವರ್ಗದ ಅಭ್ಯರ್ಥಿಗಳು ಪಾವತಿಸಬೇಕಾದ ಶುಲ್ಕ | **ರೂ.500+18% ಜಿ.ಎಸ್.ಟಿ = ರೂ.590.00** |

ಅಭ್ಯರ್ಥಿಗಳು ನಿಗದಿತ ಅರ್ಜಿ ನಮೂನೆಯಲ್ಲಿ ವಿವರಗಳನ್ನು ಭರ್ತಿ ಮಾಡಿ, ಅರ್ಜಿ ಶುಲ್ಕವನ್ನು ಸಂಘದ ಕೇಂದ್ರ ಕಛೇರಿ, ಶಿವಮೊಗ್ಗದಲ್ಲಿ ನಗದಾಗಿ ಪಾವತಿಸಿ ರಶೀದಿ ಪಡೆಯತಕ್ಕದ್ದು ಅಥವಾ ವ್ಯವಸ್ಥಾಪಕ ನಿರ್ದೇಶಕರು, ಮಲೆನಾಡು ಅಡಿಕೆ ಮಾರಾಟದ ಸಹಕಾರ ಸಂಘ ನಿಯಮಿತ, ಶಿವಮೊಗ್ಗ ಅಥವಾ **THE MANAGING DIRECTOR, THE MAMCOS LTD., SHIVAMOGGA** ಇವರ ಹೆಸರಿಗೆ ಕಡ್ಡಾಯವಾಗಿ ರಾಷ್ಟ್ರೀಕೃತ ಬ್ಯಾಂಕ್‌ನಲ್ಲಿ ಪಾವತಿಯಾಗುವಂತೆ ಡಿಮ್ಯಾಂಡ್ ಡ್ರಾಫ್ಟ್ ಪಡೆದು ಅದರ ಪ್ರತಿಯನ್ನು ಹಾಗೂ ಅಭ್ಯರ್ಥಿಯ ಇತ್ತೀಚಿನ ಮೂರು ಪಾಸ್‌ಪೋರ್ಟ್ ಅಳತೆಯ ಭಾವಚಿತ್ರಗಳನ್ನು ಇತರೆ ದಾಖಲಾತಿಗಳೊಂದಿಗೆ ಲಗತ್ತಿಸಿ, ದಿನಾಂಕ 03.03.2026ರ ಸಂಜೆ 4.00 ಗಂಟೆಯ ಒಳಗೆ ನೋಂದಾಯಿತ ಅಂಚೆ ಮೂಲಕ ಅಥವಾ ಖುದ್ದಾಗಿ ಸದಸ್ಯ ಕಾರ್ಯದರ್ಶಿ, ಸಿಬ್ಬಂದಿ ನೇರ ನೇಮಕಾತಿ ಸಮಿತಿ, ಹಾಗೂ ವ್ಯವಸ್ಥಾಪಕ ನಿರ್ದೇಶಕರು, ಮಲೆನಾಡು ಅಡಿಕೆ ಮಾರಾಟದ ಸಹಕಾರ ಸಂಘ ನಿ., ಶಿವಮೊಗ್ಗ, ಎ.ಪಿ.ಎಂ.ಸಿ ಯಾರ್ಡ್, ಸಾಗರ ರಸ್ತೆ, ಶಿವಮೊಗ್ಗ- 577204 ಈ ವಿಳಾಸಕ್ಕೆ ಕಳುಹಿಸತಕ್ಕದ್ದು ಅಥವಾ ತಲುಪಿಸತಕ್ಕದ್ದು. ತಡವಾಗಿ ಬಂದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

ಅರ್ಜಿ ಸಲ್ಲಿಸುವ ಲಕೋಟೆಯ ಮೇಲೆ **"ಹಮಾಲರ ಹುದ್ದೆಗೆ ಅರ್ಜಿ"** ಎಂದು ಸ್ಪಷ್ಟವಾಗಿ ನಮೂದಿಸತಕ್ಕದ್ದು.

## 3. <u>ನೇಮಕಾತಿಗೆ ಸಂಬಂಧಿಸಿದಂತೆ ಸೂಚನೆಗಳು:-</u>

3.1 ಹಮಾಲರ ಹುದ್ದೆಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಯಾವುದೇ ಅಂಗ ವೈಕಲ್ಯ ಮತ್ತು ದೈಹಿಕ ನ್ಯೂನತೆ ಹೊಂದಿರದ ಕುರಿತು ಸರ್ಕಾರದ ಅಸಿಸ್ಟಂಟ್ ಸರ್ಜನ್ ಹುದ್ದೆಗಿಂತ ಕಡಿಮೆ ಇಲ್ಲದ ದರ್ಜೆಯ ವೈದ್ಯರಿಂದ ಪಡೆದ ವೈದ್ಯಕೀಯ ಪ್ರಮಾಣ ಪತ್ರವನ್ನು ಅರ್ಜಿಯ ಜೊತೆ ಸಲ್ಲಿಸತಕ್ಕದ್ದು.

3.2 ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗಧಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು. ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂದಿರುಗಿಸಲಾಗುವುದಿಲ್ಲ.

3.3 ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಅರ್ಹತೆಯನ್ನು ಹೊಂದಿಲ್ಲದಿದ್ದರೂ ಸಹ ನಿಗದಿತ ಶುಲ್ಕವನ್ನು ಪಾವತಿಸಿ ಅರ್ಜಿ ಸಲ್ಲಸಿದಲ್ಲಿ ಅಂತಹ ಅರ್ಜಿ ಶುಲ್ಕವನ್ನೂ ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ.

3.4 ನೇಮಕಾತಿಯಲ್ಲಿ ಸಂಘಕ್ಕೆ ಯಾವುದೇ ಮೀಸಲಾತಿ ನಿಯಮಗಳು ಅನ್ವಯಿಸುವುದಿಲ್ಲ.

3.5 ಪ್ರತ್ಯಕ್ಷ ಅಥವಾ ಪರೋಕ್ಷವಾಗಿ ಯಾವುದೇ ಪ್ರಭಾವ/ಆಮಿಷವನ್ನು ಒಡ್ಡುವಂತಿಲ್ಲ.

3.6 ಹುದ್ದೆಗೆ ನೇಮಕಗೊಂಡ ಅಭ್ಯರ್ಥಿಯು ಎರಡು ವರ್ಷದ ಅವಧಿಗೆ **"ಪರೀಕ್ಷಾರ್ಥ ಅವಧಿ" / "Probationary Period"** ಎಂದು ಪ್ರಾರಂಭದಲ್ಲಿ ಕಾರ್ಯನಿರ್ವಹಿಸತಕ್ಕದ್ದು. ಪರೀಕ್ಷಾರ್ಥ ಅವಧಿಯಲ್ಲಿ ಸಂಘದಲ್ಲಿನ ಅವರ ಕೆಲಸವು ಪೂರ್ಣ ತಾತ್ಕಾಲಿಕವಾಗಿರುತ್ತದೆ ಮತ್ತು ಈ ಅವಧಿಯಲ್ಲಿ ಅಭ್ಯರ್ಥಿಗಳು ಸಂಘದಲ್ಲಿನ ಕೆಲಸವನ್ನು ನಿರ್ವಹಿಸಲು ಅಸಮರ್ಥರೆಂದು ಕಂಡು ಬಂದಲ್ಲಿ ಆಡಳಿತ

ಮಂಡಲಿಯು ಕಾರಣವನ್ನು ದಾಖಲಿಸಿ ಅವರನ್ನು ಕೆಲಸದಿಂದ ತೆಗೆದು ಹಾಕಬಹುದು. ಪರೀಕ್ಷಾರ್ಥ ಅವಧಿಯಲ್ಲಿ ನೌಕರನು ಯಾವುದೇ ಅಶಿಸ್ತು ಅಥವಾ ದುರ್ವರ್ತನೆ ತೋರಿದಲ್ಲಿ ಅವರ ವಿರುದ್ಧ ವಿಚಾರಣೆಯನ್ನು ನಿಯಮಾನುಸಾರ ನಡೆಸಿ, ಆರೋಪ ಸಾಬೀತಾದಲ್ಲಿ ಅವನನ್ನು ಕೆಲಸದಿಂದ ವಜಾಗೊಳಿಸಲಾಗುವುದು

3.7 **"ಪರೀಕ್ಷಾರ್ಥ ಅವಧಿ" / "Probationary Period"** ನಲ್ಲಿ ಮಾಹೆಯಾನ `**ಕ್ರೋಢೀಕೃತ ವೇತನ**' ವನ್ನು ಮಾತ್ರ ಪಾವತಿಸಲಾಗುತ್ತದೆ. ಪರೀಕ್ಷಾರ್ಥ ಅವಧಿಯನ್ನು ಪೂರೈಸಿದ ದಿನಾಂಕದಿಂದ ನಿಗದಿಪಡಿಸಲಾದ ವೇತನ ಶ್ರೇಣಿಯನ್ನು ನೀಡಲಾಗುವುದು. ಕ್ರೋಢೀಕೃತ ವೇತನದಲ್ಲಿ ನಿಯಮಾನುಸಾರ ಪಾವತಿಸುವ ಭವಿಷ್ಯ ನಿಧಿ, ಇಎಸ್ಐ, ವೃತ್ತಿ ತೆರಿಗೆ ಇತ್ಯಾದಿ ಶಾಸನಬದ್ಧ ಕಡಿತಗಳನ್ನು ಮಾಡಲಾಗುವುದು.

3.8 ನೇಮಕಾತಿಯ ಕುರಿತು ಸಲ್ಲಿಸಲಾಗುವ ಅರ್ಜಿಗಳನ್ನು ಸ್ವೀಕರಿಸುವ ಅಥವಾ ಯಾವುದೇ ಕಾರಣವನ್ನು ನೀಡದೆ ತಿರಸ್ಕರಿಸುವ ಅಧಿಕಾರ ಸಂಘದ ಸಿಬ್ಬಂದಿ ನೇರ ನೇಮಕಾತಿ ಸಮಿತಿಗೆ ಇರುತ್ತದೆ. ಅಪೂರ್ಣ ಮಾಹಿತಿ ಮತ್ತು ದಾಖಲೆಗಳನ್ನು ದೃಢೀಕರಿಸದೇ ಸಲ್ಲಿಸಿದಲ್ಲಿ ಅಂತಹ ಅರ್ಜಿಗಳನ್ನು ಹಾಗೂ ನಿಗದಿತ ಅವಧಿಯ ನಂತರ ಬಂದ ಅರ್ಜಿಗಳನ್ನು ತಿರಸ್ಕರಿಸಲಾಗುವುದು. ನೇಮಕಾತಿ ಪ್ರಕ್ರಿಯೆಯನ್ನು ಯಾವುದೇ ಕಾರಣವನ್ನು ನೀಡದೆ ಮುಂದೂಡುವ, ರದ್ದು ಪಡಿಸುವ ಹಾಗೂ ನಿಬಂಧನೆಗಳನ್ನು ಬದಲಿಸುವ ಸಂಪೂರ್ಣ ಹಕ್ಕನ್ನು ಸಿಬ್ಬಂದಿ ನೇರ ನೇಮಕಾತಿ ಸಮಿತಿಯು ಹೊಂದಿರುತ್ತದೆ.

## 4. ಪರೀಕ್ಷಾ ವಿಧಾನ:-

4.1 ಹಮಾಲರ ಹುದ್ದೆಯ ಲಿಖಿತ ಪರೀಕ್ಷೆಯನ್ನು ಬಾಹ್ಯ ಮೂಲಗಳಿಂದ ನಡೆಸಲಾಗುವುದು. 30 ಅಂಕಗಳ ಲಿಖಿತ ಪರೀಕ್ಷೆಯನ್ನು ಕನ್ನಡ ಭಾಷೆಯಲ್ಲಿ ನಡೆಸಲಾಗುವುದು. ಲಿಖಿತ ಪರೀಕ್ಷೆಯಲ್ಲಿ ಆಯ್ಕೆಯಾದ ಅಭ್ಯರ್ಥಿಗಳಿಗೆ 1:5ರ ಅನುಪಾತದಲ್ಲಿ ಸಂದರ್ಶನವನ್ನು ನಡೆಸಲಾಗುವುದು.

4.2 ಮೌಖಿಕ ಸಂದರ್ಶನಕ್ಕೆ ಗರಿಷ್ಠ 15 ಅಂಕಗಳನ್ನು ನಿಗದಿಪಡಿಸಲಾಗಿದ್ದು, ಅಭ್ಯರ್ಥಿಯು ಲಿಖಿತ ಪರೀಕ್ಷೆಯಲ್ಲಿ ಗಳಿಸಿದ ಅಂಕಗಳನ್ನು ಶೇಕಡಾ 85ಕ್ಕಿಳಿಸಿ, ಉಳಿದ ಪ್ರತಿಶತ 15 ಅಂಕಗಳನ್ನು ಸಂದರ್ಶನಕ್ಕೆ ನೀಡಲಾಗುವುದು.

4.3 ಲಿಖಿತ ಪರೀಕ್ಷೆಯ ದಿನಾಂಕ, ವೇಳೆ, ಸ್ಥಳ ಇವುಗಳ ವಿವರಗಳನ್ನು ಅರ್ಹ ಅಭ್ಯರ್ಥಿಗಳಿಗೆ ಪ್ರತ್ಯೇಕವಾಗಿ ಅರ್ಜಿಯಲ್ಲಿ ನೀಡಲಾದ ಇ-ಮೇಲ್ ಅಥವಾ ವಾಟ್ಸಾಪ್ ಹೊಂದಿರುವ ಮೊಬೈಲ್ ಸಂಖ್ಯೆಗೆ ಕಳುಹಿಸಲಾಗುವುದು. ಅಭ್ಯರ್ಥಿಗಳು ಲಿಖಿತ ಪರೀಕ್ಷೆಗೆ ತಮ್ಮ ಸ್ವಂತ ಖರ್ಚಿನಲ್ಲಿ ಹಾಜರಾಗತಕ್ಕದ್ದು.

**ವಿಶೇಷ ಸೂಚನೆ:-**

**ಅರ್ಜಿಯೊಂದಿಗೆ ಶಾಲಾ ದಾಖಲಾತಿಗಳು ಹಾಗೂ ಇತರೆ ದಾಖಲಾತಿಗಳ ಪ್ರತಿಗಳನ್ನು ಗೆಜೆಟೆಡ್ ಅಧಿಕಾರಿಗಳಿಂದ ದೃಢೀಕರಿಸಿ ಲಗತ್ತಿಸತಕ್ಕದ್ದು.**

*****************